ಪ್ರಜಾವಾಣಿ
Online Newspaper Clipping Service
Dtd- Monday, 13th, May- 2019
Page No.01

# ಜುಲೈನಲ್ಲಿ ವೈದ್ಯಕೀಯ ಕೋರ್ಸ್ ಶುಲ್ಕ ನಿಗದಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: ವೈದ್ಯಕೀಯ ಕೋರ್ಸ್‌ಗಳ ಶುಲ್ಕವನ್ನು ಶೇ 15ರಷ್ಟು ಹೆಚ್ಚಿಸಲು ಖಾಸಗಿ ವೈದ್ಯಕೀಯ ಕಾಲೇಜುಗಳು ಒತ್ತಡ ಹೇರುತ್ತಿದ್ದು, ಜುಲೈ ಮೊದಲ ವಾರದ ವೇಳೆಗೆ ಶುಲ್ಕ ನಿಗದಿಪಡಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಇಲಾಖೆ ತಿಳಿಸಿದೆ.

'ಇದೀಗ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶ/ ಕೌನ್ಸೆಲಿಂಗ್ ಪ್ರಕ್ರಿಯೆ ನಡೆಯುತ್ತಿದೆ. ಈ ತಿಂಗಳ ಅಂತ್ಯದೊಳಗೆ ಅದು ಕೊನೆಗೊಳ್ಳಬಹುದು. ನೀತಿ ಸಂಹಿತೆಯೂ ಜಾರಿಯಲ್ಲಿದೆ. ಹೀಗಾಗಿ ಜುಲೈ ಮೊದಲ ವಾರದಲ್ಲಷ್ಟೇ ಶುಲ್ಕ ಹೆಚ್ಚಳ ಕುರಿತಂತೆ ಚರ್ಚಿಸಲು ನಾವು ನಿರ್ಧರಿಸಿದ್ದೇವೆ' ಎಂದು ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕ ಡಾ.ಪಿ.ಜಿ. ಗಿರೀಶ್ 'ಪ್ರಜಾವಾಣಿ'ಗೆ ತಿಳಿಸಿದರು.

ಕಳೆದ ವರ್ಷ ಶೇ 8ರಷ್ಟು ಶುಲ್ಕ ಹೆಚ್ಚಳಕ್ಕೆ ಸರ್ಕಾರ ಅನುಮತಿ ನೀಡಿತ್ತು. ಹೀಗಾಗಿ ಈ ಬಾರಿ ಮತ್ತೆ ಶುಲ್ಕ ಹೆಚ್ಚಳಕ್ಕೆ ಸರ್ಕಾರ ಅನುಮತಿ ನೀಡುವ ಸಾಧ್ಯತೆ ಕಡಿಮೆ ಎಂದು ಮೂಲಗಳು ತಿಳಿಸಿವೆ.

'ಸರ್ಕಾರ ಶುಲ್ಕ ಹೆಚ್ಚಳ ಮಾಡದಿದ್ದರೆ ಖಾಸಗಿ ಕಾಲೇಜುಗಳ ಅವಸಾನ ನಿಶ್ಚಿತ. ಖಾಸಗಿ ಕಾಲೇಜುಗಳು ಕಡಿಮೆ ಶುಲ್ಕ ಪಡೆಯಬೇಕು ಎಂದು ಸರ್ಕಾರ ಬಯಸಿದ್ದೇ ಆದರೆ ಗುಣಮಟ್ಟವನ್ನು ಕೇಳಬಾರದು' ಎಂದು ರಾಜ್ಯ ವೃತ್ತಿಪರ ಕಾಲೇಜುಗಳ ಪ್ರತಿಷ್ಠಾನದ ಅಧ್ಯಕ್ಷ ಎಂ.ಆರ್. ಜಯರಾಂ ತಿಳಿಸಿದರು.

ವಿಶ್ವವಾಣಿ



# 110 ವಿದ್ಯಾರ್ಥಿಗಳಿಗೆ ನೀಟ್ ಮರು ಪರೀಕ್ಷೆ



**ಬೆಂಗಳೂರು:** ಹಂಪಿ ಎಕ್ಸ್‌ಪ್ರೆಸ್ ರೈಲು ವಿಳಂಬದಿಂದ ಮೇ.5ರಂದು ನೀಟ್ ಪರೀಕ್ಷೆಯಿಂದ ವಂಚಿತರಾದವರಿಗೆ ಮೇ 20ರಂದು ಮರು ಪರೀಕ್ಷೆಗೆ ಅವಕಾಶ ಕಲ್ಪಿಸಿದೆಯಾದರೂ, ಅದಕ್ಕೆ ಅರ್ಜಿ ಸ್ವೀಕೃತವಾಗಿದ್ದು ಮಾತ್ರ ಕೇವಲ 110 ಅರ್ಜಿಗಳು. ರೈಲು ವಿಳಂಬದಿಂದ ಸುಮಾರು 500 ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ದೊರಕಿರಲಿಲ್ಲ ಎನ್ನಲಾಗಿತ್ತಾದರೂ, ಮರು ಪರೀಕ್ಷೆಗೆ ಹೆಚ್ಚಿನ ವಿದ್ಯಾರ್ಥಿಗಳು ಆಸಕ್ತಿ ತೋರಿಲ್ಲ. ಅರ್ಜಿ ಸಲ್ಲಿಸಲು ಮೇ 10 ಕೊನೆಯ ದಿನವಾಗಿತ್ತು. ವಿಳಂಬಗೊಂಡ ರೈಲಿನಲ್ಲಿ ಪ್ರಯಾಣಿಸುತ್ತಿದ್ದುದನ್ನು ಸಾಬೀತುಪಡಿಸಲು, ಅರ್ಜಿಯೊಂದಿಗೆ ರೈಲು ಟಿಕೆಟ್ ಹಾಗೂ ಪ್ರವೇಶ ಪತ್ರಗಳ ಪ್ರತಿಯನ್ನು ಸಲ್ಲಿಸಿದವರಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಯಾವುದೇ ಕಾರಣ ನೀಡದೇ ಮರು ಪರೀಕ್ಷೆ ಕೋರಿ ಸಲ್ಲಿಕೆಯಾಗಿದ್ದ 300 ಅರ್ಜಿಗಳು ತಿರಸ್ಕೃತಗೊಂಡಿವೆ. ಬೆಂಗಳೂರಿನಲ್ಲಿ ನಾಲ್ಕು ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ನಾಲ್ಕೂ ಕೇಂದ್ರಗಳಿಗೆ ಪ್ರತ್ಯೇಕ ಸಹಾಯವಾಣಿಗಳನ್ನು ಕಲ್ಪಿಸಲಾಗಿದೆ. ಇವುಗಳಿಗೆ ಇಲ್ಲಿಯವರೆಗೆ 900ಕ್ಕೂ ಅಧಿಕ ಕರೆಗಳು ಬಂದಿದ್ದು, ಕೆಲವರು, ತಾವು ಮತ್ತೆ ಪರೀಕ್ಷೆಗೆ ಹಾಜರಾಗಲು ಅನುಮತಿ ಕೋರಿದ್ದಾರೆ. ಆದರೆ, ರೈಲು ವಿಳಂಬದಿಂದ ಪರೀಕ್ಷೆ ಬರೆಯುವ ಅವಕಾಶ ವಂಚಿತರಾದವರಿಗೆ ಮಾತ್ರ ಮತ್ತೊಮ್ಮೆ ಪರೀಕ್ಷೆ ಬರೆಯಲು ಅನುಮತಿ ಕಲ್ಪಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.